# MAY 11,2025
# ALL INDIA RADIO- DHARWAD
# PRADESH SAMACHARA (KANNADA) 12PM

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

<><><>

**ಥಲಸ್ಸೇಮಿಯಾ,** ಆನುವಂಶಿಕ ರಕ್ತರೋಗಗಳ ಜನ ಜಾಗ್ರತಿ ಸಪ್ತಾಹ ರಾಜ್ಯಾದ್ಯಂತ ಆಚರಿಸಲಾಗುತ್ತಿದೆ. ಹಾವೇರಿ ಜಿಲ್ಲೆ ಅಕ್ಕಿ ಆಲೂರು ಗ್ರಾಮವು ಅತಿ ಹೆಚ್ಚು ರಕ್ತದಾನಿಗಳಿರುವ ಕಾರಣದಿಂದ ರಕ್ತ ಸೈನಿಕರ ತವರು ಎಂದೆನಿಸಿಕೊಂಡಿದೆ. ಗ್ರಾಮದ ಹೆಚ್ಚಿನ ಯುವಕರು ರಕ್ತದಾನಿಗಳಾಗಿದ್ದು, ಹೀಮೋಫಿಲಿಯಾ, ಥಲಸ್ಸೇಮಿಯಾ ರೋಗಿಗಳ ರಕ್ತದ ಅವಶ್ಯಕತೆಯನ್ನು ಪೂರೈಸುತ್ತಿದ್ದಾರೆ. ಈ ಬಗ್ಗೆ ರಕ್ತದಾನಿ, ಹಾನಗಲ್ ಪೊಲೀಸ್ ಠಾಣಾ ಪೇದೆ, ಕರಿಬಸಪ್ಪ ಗೊಂದಿ ಅವರು ಪ್ರದೇಶ ಸಮಾಚಾರಕ್ಕಾಗಿ ಮಾಹಿತಿ ನೀಡಿದ್ದಾರೆ.

<><><>

**ಮಹಾನಗರಗಳಿಗೆ,** ಗ್ರಾಮೀಣ ಜನ ದುಡಿಯಲು ಗುಳೆ ಹೋಗುವುದನ್ನು ತಪ್ಪಿಸಲು, ಮಹಾತ್ಮ ಗಾಂಧಿ ನರೇಗಾ ಯೋಜನೆ ಅಡಿ, ಈ ತಿಂಗಳ 31ರ ವರೆಗೆ, 'ದುಡಿಯೋಣ ಬಾ' ಅಭಿಯಾನ ಜರುಗಲಿದೆ ಎಂದು, ಯಾದಗಿರಿ ಜಿಲ್ಲೆಯ, ಗ್ರಾಮೀಣಾಭಿವೃದ್ಧಿ ಇಲಾಖೆ ಸಹಾಯಕ ನಿರ್ದೇಶಕ, ರಾಮಚಂದ್ರ ಬಸೂದೆ ತಿಳಿಸಿದ್ದಾರೆ. ಯಾದಗಿರಿ ಜಿಲ್ಲೆ, ಗುರುಮಠಕಲ್ ತಾಲೂಕು, ಪಸಪುಲ್ ಹಾಗೂ ಕೊಂಕಲ್ ಗ್ರಾಮಗಳಲ್ಲಿ ಆಯೋಜಿಸಿದ್ದ, 'ದುಡಿಯೋಣ ಬಾ' ಅಭಿಯಾನಕ್ಕೆ ಚಾಲನೆ ನೀಡಿ ಅವರು, ಮಾತನಾಡಿದರು. ಒಂದು ಕುಟುಂಬಕ್ಕೆ, ನೂರು ದಿನಗಳ ಕೂಲಿ ಕೆಲಸ ಹಾಗೂ ಪುರು ', ಮಹಿಳೆಗೆ ಸಮಾನಕೂಲಿ, ಮಾಸಿಕ 370 ರೂಪಾಯಿ. ಪ್ರಧಾನಮಂತ್ರಿ ಜೀವನ ಜ್ಯೋತಿ ವಿಮೆ ಯೋಜನೆ, ಪ್ರಧಾನಮಂತ್ರಿ ಸುರಕ್ಷಾ ವಿಮೆ ಹಾಗೂ ಜೀವ ವಿಮೆ ಸೌಲಭ್ಯದ ಬಗ್ಗೆ, ಹೇಳಿದರು.

<><><>

**ಮಂಗಳೂರಿನ ಪಡೀಲ್‌ನಲ್ಲಿ,** ಪಾರಂಪರಿಕ ಶೈಲಿಯಲ್ಲಿ ನಿರ್ಮಾಣಗೊಂಡ, ಜಿಲ್ಲಾಧಿಕಾರಿಗಳ ನೂತನ ಕಚೇರಿ ಸಂಕೀರ್ಣವನ್ನು, ಇದೇ 16 ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಉದ್ಘಾಟಿಸಲಿದ್ದಾರೆ ಎಂದು, ದಕ್ಷಿಣಕನ್ನಡ ಜಿಲ್ಲಾ ಉಸ್ತುವಾರಿ ಸಚಿವ, ದಿನೇಶ ಗುಂಡೂರಾವ ತಿಳಿಸಿದ್ದಾರೆ. ಮಂಗಳೂರಿನಲ್ಲಿ ಮಾತನಾಡಿದ ಅವರು, 23 ಇಲಾಖೆಗಳನ್ನು ನೂತನ ಕಟ್ಟಡಕ್ಕೆ ಸ್ಥಳಾಂತರಿಸಲು ತೀರ್ಮಾನಿಸಲಾಗಿದೆ, ಎಂದರು. ಪೋಡಿ ಮುಕ್ತ ಅಭಿಯಾನದಡಿ, 70 ಸಾವಿರ ಫಲಾನುಭವಿಗಳಿಗೆ, ಕಂದಾಯ  ದಾಖಲೆಗಳನ್ನು ವಿತರಿಸಲಾಗುವುದು. 35 ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಾಣಗೊಂಡ, ಸ್ಮಾರ್ಟ್ ಒಳಾಂಗಣ ಕ್ರೀಡಾಂಗಣವನ್ನು ಸಹ ಮುಖ್ಯಮಂತ್ರಿ ಉದ್ಘಾಟಿಸಲಿದ್ದಾರೆ ಎಂದು, ಅವರು ಹೇಳಿದರು.

<><><>

**ಮುಂಬರುವ ಮಳೆಗಾಲದಲ್ಲಿ,** ಜಿಲ್ಲೆಯ ಯಾವುದೇ ಭಾಗದಲ್ಲಿ, ಪ್ರಕೃತಿ ಅವಘಡಗಳು ಸಂಭವಿಸದಂತೆ, ಈಗಿನಿಂದಲೇ ಅಗತ್ಯ ಮುನ್ನೆಚ್ಚರಿಕೆ ಕ್ರಮ  ಕೈಗೊಂಡು, ಜೀವಹಾನಿಯಾಗದಂತೆ ಎಚ್ಚರ ವಹಿಸಲು, ಉತ್ತರಕನ್ನಡ ಜಿಲ್ಲಾಧಿಕಾರಿ ಕೆ.ಲಕ್ಷ್ಮೀಪ್ರಿಯಾ ಸೂಚಿಸಿದ್ದಾರೆ. ಕಾರವಾರ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ, ಅವರು ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆ ನಡೆಸಿದರು.ಜಿಲ್ಲೆಯಲ್ಲಿ ಗುಡ್ಡ ಕುಸಿಯಬಹುದಾದ, 439 ಪ್ರದೇಶಗಳನ್ನು ಗುರುತಿಸಲಾಗಿದೆ. ತುರ್ತು ಸಂದರ್ಭದಲ್ಲಿ ಸುರಕ್ಷಿತ ಸ್ಥಳಗಳಿಗೆ ಜನರನ್ನು ಸ್ಥಳಾಂತರಿಸಲು, ಸಿದ್ಧತೆ ಹಾಗೂ ಮುನ್ನೆಚ್ಚರಿಕೆ ನೀಡಲು ಸ್ಟಾರ್ಟರ್ಸ್ ಸುಸ್ಥಿತಿ ಖಾತ್ರಿ ಪಡಿಸುವಂತೆ, ಆದೇಶಿಸಿದರು. ರಾಷ್ಟ್ರೀಯ ಹೆದ್ದಾರಿ ಬದಿಯಲ್ಲಿ, ಅನಧಿಕೃತವಾಗಿ ಕಾರ್ಯನಿರ್ವಹಿಸುತ್ತಿರುವ ಅಂಗಡಿಗಳನ್ನು, ಮಳೆಗಾಲಕ್ಕೂ ಮುನ್ನ ತೆರವುಗೊಳಿಸುವಂತೆ, ತಹಸೀಲ್ದಾರ್‌ಗಳಿಗೆ, ಜಿಲ್ಲಾಧಿಕಾರಿ ಸೂಚಿಸಿದರು.

<><><>

**ಸಾಮಾಜಿಕ ಜಾಲತಾಣಗಳ ಮೂಲಕ** ಸುಳ್ಳು ಸುದ್ದಿಗಳನ್ನು ಹರಡುವವರ ಮೇಲೆ ಪೊಲೀಸ್ ಇಲಾಖೆ ತೀವ್ರ ನಿಗಾ ಇರಿಸಿದೆ ಎಂದು ವಿಜಯಪುರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಲಕ್ಷ್ಮಣ್ ನಿಂಬರಗಿ ತಿಳಿಸಿದ್ದಾರೆ. ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ವಿವಿಧ ಇಲಾಖೆ ಅಧಿಕಾರಿಗಳ ಸಭೆಯಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ಸಾರ್ವಜನಿಕರು ಸುಳ್ಳು ಸುದ್ದಿ, ವದಂತಿಗಳಿಗೆ ಕಿವಿಕೊಡಬಾರದು. ಸಾಮಾಜಿಕ ಮಾಧ್ಯಮಗಳ ಮೂಲಕ ಶಾಂತಿ ಸುವ್ಯವಸ್ಥೆಗೆ ಧಕ್ಕೆ ತರುವ ಸುದ್ದಿಗಳನ್ನು ಹರಿಬಿಟ್ಟಲ್ಲಿ ಅಂತಹವರ ಮೇಲೆ ಸೂಕ್ತ ಕಾನೂನು ಕ್ರಮ ಜರುಗಿಸಲಾಗುವುದು ಎಂದರು.

<><><>

**ಬಿಬಿಎಂಪಿ ವ್ಯಾಪ್ತಿಯಲ್ಲಿ** ಪರಿಶಿ ್ಟ ಜಾತಿ ಸಮಗ್ರ ಸಮೀಕ್ಷಾ ಕಾರ್ಯವನ್ನು ತ್ವರಿತಗತಿಯಲ್ಲಿ ಪೂರ್ಣಗೊಳಿಸಲು ಮುಖ್ಯ ಆಯುಕ್ತರಾದ ಮಹೇಶ್ವರ್ ರಾವ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

<><><>

**‘ಆಪರೇ ’ನ್ ಅಭ್ಯಾಸ್’ ಅಣಕು ಪ್ರದರ್ಶನವನ್ನು,** ಮಂಡ್ಯ ಜಿಲ್ಲೆಯ ಕೆ.ಆರ್.ಎಸ್ ಬೃಂದಾವನ ಉದ್ಯಾನದಲ್ಲಿ, ಇಂದು ಸಂಜೆ 4 ಗಂಟೆಗೆ ಆಯೋಜಿಸಲಾಗಿದೆ ಎಂದು, ಜಿಲ್ಲಾಧಿಕಾರಿ ಕುಮಾರ ತಿಳಿಸಿದ್ದಾರೆ.

<><><>

**ದಾವಣಗೆರೆ ಅಂಚೆ ವಿಭಾಗ,** ವಿವಿಧ ವಿಭಾಗಗಳಲ್ಲಿ, 11 ಪ್ರಶಸ್ತಿಗಳನ್ನು ಪಡೆದಿದೆ ಎಂದು, ಸ್ಥಾನಿಕ ಸಹಾಯಕ ಅಂಚೆ ಅಧೀಕ್ಷಕ ಗುರುಪ್ರಸಾದ ತಿಳಿಸಿದ್ದಾರೆ.

<><><>